ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡವಳಿಗಳು

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನೊಣವಿನಕೆರೆ, ತಿಪಟೂರು ತಾಲ್ಲೂಕು ಇಲ್ಲಿನ ಬೋಧಕ & ಬೋಧಕೇತರ ಸಿಬ್ಬಂದಿ ವರ್ಗದವರನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೆಳ್ಳಾವಿ, ತುಮಕೂರು ತಾಲ್ಲೂಕು & ಜಿಲ್ಲೆ ಇಲ್ಲಿಗೆ ಹುದ್ದೆ ಸಮೇತ ಸ್ಥಳಾಂತರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 23 ಹೆಚ್‌ಪಿಸಿ 2019 ಬೆಂಗಳೂರು, ದಿನಾಂಕ:16-02-2019.

*****

ಪ್ರಸ್ತಾವನೆ

ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದ್ದು ಸಮೀಪದ ತಿಪಟೂರು ಮತ್ತು ತುರುವೆಕೆರೆ ಪಟ್ಟಣಗಳ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುತ್ತಿರುವ ಹಿನ್ನೆಲೆಯಲ್ಲಿ 2019-20ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಾರಿಗೆ ಬರುವಂತೆ ಸದರಿ ಕಾಲೇಜನ್ನು ತುಮಕೂರು ಜಿಲ್ಲೆ ಮತ್ತು ತಾಲ್ಲೂಕಿನಲ್ಲಿರುವ ಬೆಳ್ಳಾವಿ ಗ್ರಾಮಕ್ಕೆ ಸ್ಥಳಾಂತರಿಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಅನುಮತಿಸಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಆದೇಶದಲ್ಲಿ ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯನ್ನು ಹುದ್ದೆ ಸಮೇತ ತುಮಕೂರು ತಾಲ್ಲೂಕಿನ ಬೆಳ್ಳಾವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವರ್ಗಾಯಿಸಲು ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ತಿಪಟೂರು ತಾಲ್ಲೂಕಿನ ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ & ಬೋಧಕೇತರ ಸಿಬ್ಬಂದಿ ವರ್ಗದವರನ್ನು ಹುದ್ದೆ ಸಮೇತ ಸ್ಥಳಾಂತರಿಸಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ:08:ಹು.ಸ.ಸ್ಥ:2019-20:ವ&ನಿ ಬೆಂಗಳೂರು, ದಿನಾಂಕ: 2.05.2019**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ತುಮಕೂರು ತಾಲ್ಲೂಕಿನ ಬೆಳ್ಳಾವಿ ಗ್ರಾಮಕ್ಕೆ ಸ್ಥಳಾಂತರಗೊಂಡಿರುವ ತಿಪಟೂರು ತಾಲ್ಲೂಕಿನ ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಳಕಂಡ ಬೋಧಕ & ಬೋಧಕೇತರ ಸಿಬ್ಬಂದಿ ವರ್ಗದವರನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೆಳ್ಳಾವಿ, ತುಮಕೂರು ತಾಲ್ಲೂಕು ಇಲ್ಲಿಗೆ ಹುದ್ದೆ ಸಮೇತ ಸ್ಥಳಾಂತರಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಹೆಸರು | ಪದನಾಮ | ವಿಷಯ |
|---|---|---|---|
| 1 | 2 | 3 | 4 |
| 1 | ಎನ್. ಸಿದ್ದೇಶ್ವರ | ಸಹಾಯಕ ಪ್ರಾಧ್ಯಾಪಕರು | ಅರ್ಥಶಾಸ್ತ್ರ |
| 2 | ಪುಟ್ಟಲಕ್ಷ್ಮಯ್ಯ ಸಿ.ಹೆಚ್. | ಸಹಾಯಕ ಪ್ರಾಧ್ಯಾಪಕರು | ಕನ್ನಡ |

Arts Shifting Person Ordr 22.7.2017

| 1 | 2 | 3 | 4 |
|---|---|---|---|
| 3 | ವಿಶ್ವನಾಥ ಕೆ.ಎಸ್. | ಸಹಾಯಕ ಪ್ರಾಧ್ಯಾಪಕರು | ಇತಿಹಾಸ |
| 4 | ಧರಣೇಶ ಎಸ್.ಟಿ. | ಸಹಾಯಕ ಪ್ರಾಧ್ಯಾಪಕರು | ರಾಜ್ಯಶಾಸ್ತ್ರ |
| 5 | ಶ್ರೀಧರ ಸಿ.ಆರ್. | ಸಹಾಯಕ ಪ್ರಾಧ್ಯಾಪಕರು | ಇಂಗ್ಲೀಷ್ |
| 6 | ವನರಾಜಯ್ಯ | ಗ್ರಂಥಪಾಲಕರು | – |
| 7 | ಮಲ್ಲಿಕಾರ್ಜುನ ಪ್ರಭು ಕೆ.ಎಸ್ | ದೈಹಿಕ ಶಿಕ್ಷಣ ನಿರ್ದೇಶಕರು | – |
| 8 | ಕೆ.ಸಿ.ಸುಶೀಲಕುಮಾರ್ | ಅಧೀಕ್ಷಕರು | – |
| 9 | ಶಿಲ್ಪಾ ಟಿ.ಎನ್. | ಬೆರಳಚ್ಚುಗಾರರು | – |
| 10 | ದರ್ಶನ್ ಬಿ.ಜೆ. | ಪರಿಚಾರಕರು | – |

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ

1. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನೊಣವಿನಕೆರೆ, ತಿಪಟೂರು ತಾಲ್ಲೂಕು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೆಳ್ಳಾವಿ, ತುಮಕೂರು ತಾಲ್ಲೂಕು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮೇಲ್ಕಂಡ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರಿಗೆ(ಪ್ರಾಂಶುಪಾಲರ ಮೂಲಕ)

ಪ್ರತಿಯನ್ನು

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
3. ಜಿಲ್ಲಾ ಖಜಾನಾಧಿಕಾರಿಗಳು, ಜಿಲ್ಲಾ ಖಜಾನೆ, ತುಮಕೂರು
4. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು
5. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
6. ಕಛೇರಿ ಪ್ರತಿ.